**2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ.**

<u>ಸತ್ರ ಪ್ರಕರಣ ಸಂಖ್ಯೆ.105/2023</u>

ಪಿರ್ಯಾದುದಾರರು : ಕೆ.ಎಂ. ದೊಡ್ಡಿ ಪೊಲೀಸ್ ಠಾಣೆ.

- ವಿರುದ್ಧ -

ಆರೋಪಿಗಳು : ಪುಟ್ಟಮಾದೇಗೌಡ ಉಃ ಪುಟ್ಟಮಾದು ಮತ್ತು ಇತರರು.

: <u>ದೋಷಾರೋಪಣೆ</u> :

ನಾನು ಶ್ರೀಮತಿ ಸಯೀದುನ್ನೀಸ, ಎಂ.ಎ., ಎಲ್‌ಎಲ್.ಬಿ., 2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮಂಡ್ಯ ಈ ಮೂಲಕ ಮಾಡುವ ದೋಷಾರೋಪಣೆ ಏನೆಂದರೆ :

ನೀವು ಆರೋಪಿಗಳು :

1. ಶ್ರೀ ಪುಟ್ಟಮಾದೇಗೌಡ ಉಃ ಪುಟ್ಟಮಾದು, 53 ವರ್ಷ, ಬಿನ್ ಕೆಂಪೇಗೌಡ
2. ಶ್ರೀ ದೇವರಾಜು ಪಿ., 25 ವರ್ಷ, ಬಿನ್ ಪುಟ್ಟಮಾದ.
3. ಶ್ರೀ ಶಿವರಾಜ ಪಿ., 22 ವರ್ಷ, ಬಿನ್ ಪುಟ್ಟಮಾದ.
4. ಶ್ರೀಮತಿ ಶೋಭಾ, 45 ವರ್ಷ, ಕೋಂ. ಪುಟ್ಟಮಾದ.

ಎಲ್ಲರೂ ವಾಸಃ ಪುಟ್ಟೇಗೌಡನದೊಡ್ಡಿ ಗ್ರಾಮ, ಮದ್ದೂರು ತಾಃ ಮಂಡ್ಯ ಜಿಲ್ಲೆ.

ಮೊದಲನೆಯದಾಗಿ, ದಿನಾಂಕಃ23.03.2021 ರಂದು ರಾತ್ರಿ 10.00 ಗಂಟೆ ಸಮಯದಲ್ಲಿ ಕೆ.ಎಂ. ದೊಡ್ಡಿ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಪುಟ್ಟೇಗೌಡನದೊಡ್ಡಿ ಗ್ರಾಮದಲ್ಲಿ ಚಾಸಾ-1 ಪ್ರಮೀಳ ಮತ್ತು ಚಾಸಾ-2 ಚಿಕ್ಕಣ್ಣರವರು ತಮ್ಮ ಮನೆಯಲ್ಲಿದ್ದಾಗ 1 ರಿಂದ 4 ನೇ ಆರೋಪಿತರಾದ ನೀವು ಈ ಹಿಂದೆ ಸಂಕ್ರಾಂತಿ ಹಬ್ಬದಲ್ಲಿ ಕಿಚ್ಚು ಹಾಯಿಸುವ ವಿಚಾರವಾಗಿ ಜಗಳವಾಗಿ ತಮ್ಮ ಮೇಲೆ ಕೇಸು ದಾಖಲಾಗಿದ್ದ ಬಗ್ಗೆ ದ್ವೇಷ ಇಟ್ಟುಕೊಂಡು

ಸಮಾನ ಉದ್ದೇಶ ಹೊಂದಿ ಚಾಸಾ-1 ಮತ್ತು ಚಾಸಾ-2 ರವರನ್ನು ಉದ್ದೇಶಿಸಿ ಶಾಂತಿ ಭಂಗ ಉಂಟು ಮಾಡುವಂತೆ ಸಾರ್ವಜನಿಕವಾಗಿ 'ಸೂಳೆಮಕ್ಕಳ ಹೊರಗೆ ಬನ್ನಿ' ಎಂದು ಅವಾಚ್ಯ ಶಬ್ದಗಳಿಂದ ಬೈದಿದ್ದು, ಸದರಿ ವಿಚಾರವನ್ನು ಗ್ರಾಮದ ಮುಖಂಡರಿಗೆ ತಿಳಿಸಲು ಚಾಸಾ-1 ಮತ್ತು 2 ರವರು ಪುಟ್ಟಮಾದೇಗೌಡರವರ ವಾಸದ ಮನೆಯ ಮುಂಭಾಗ ಹಾದು ಹೋಗಿರುವ ಹೊನ್ನಾಯಕನಹಳ್ಳಿ - ಪುಟ್ಟೇಗೌಡನದೊಡ್ಡಿ ರಸ್ತೆಯಲ್ಲಿ ಹೋಗುತ್ತಿದ್ದಾಗ 2 ನೇ ಆರೋಪಿಯಾದ ನೀವು ಚಾಸಾ-2 ರವರನ್ನು ಉದ್ದೇಶಿಸಿ 'ಬಾಯಿ ಮುಚ್ಚೋ ಮುಂಡೆ' ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿರುತ್ತೀರಿ. ಆ ಮೂಲಕ ಆರೋಪಿತರಾದ ನೀವು ಈ ನ್ಯಾಯಾಲಯದ ಸಂಜ್ಞೆಯೊಳಗೆ ಭಾರತೀಯ ದಂಡ ಸಂಹಿತೆ ಕಲಂ.504 ಸಹವಾಚಕ ಕಲಂ.34 ರನ್ವಯ ಅಪರಾಧವೆಸಗಿರುತ್ತೀರಾ ಎಂದು ನಿಮ್ಮ ಮೇಲೆ ಆಪಾದಿಸಿದ್ದೇನೆ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶ ಹೊಂದಿ ಚಾಸಾ-1 ಮತ್ತು 2 ರವರನ್ನು ಅವಾಚ್ಯ ಶಬ್ದಗಳಿಂದ ಬೈಯ್ಯುತ್ತಿದ್ದಾಗ ಚಾಸಾ-2 ರವರು ಹಿಂದೆ ನಡೆದದ್ದು ನಡೆದು ಹೋಯಿತು, ಈಗ ಯಾಕೆ ಬೈಯ್ಯುತ್ತಿದ್ದೀರಿ ಎಂದು ಹೇಳಿದಾಗ 1 ರಿಂದ 3 ನೇ ಆರೋಪಿತರಾದ ನೀವು ಚಾಸಾ-2 ರವರು ಮುಂದೆ ಹೋಗದಂತೆ ಅವರನ್ನು ಅಕ್ರಮವಾಗಿ ಅಡ್ಡಗಟ್ಟಿ ತಡೆದಿರುತ್ತೀರಿ. ಆ ಮೂಲಕ ಆರೋಪಿತರಾದ ನೀವು ಈ ನ್ಯಾಯಾಲಯದ ಸಂಜ್ಞೆಯೊಳಗೆ ಭಾರತೀಯ ದಂಡ ಸಂಹಿತೆ ಕಲಂ.341 ಸಹವಾಚಕ ಕಲಂ.34 ರನ್ವಯ ಅಪರಾಧವೆಸಗಿರುತ್ತೀರಾ ಎಂದು ನಿಮ್ಮ ಮೇಲೆ ಆಪಾದಿಸಿದ್ದೇನೆ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ 2 ನೇ ಆರೋಪಿಯಾದ ನೀವು ಸಮಾನ ಉದ್ದೇಶ ಹೊಂದಿ ಚಾಸಾ-2 ರವರನ್ನು ಕೊಲೆ ಮಾಡುವ ಉದ್ದೇಶದಿಂದ ರಿಪೀಸ್ ಪಟ್ಟಿಯಿಂದ ಚಾಸಾ-2 ರವರ ಬಲ ಹಣೆ, ಬಲಕಿವಿ, ಬಲಕಣ್ಣಿನ ಹತ್ತಿರ ಮಾರಣಾಂತಿಕವಾಗಿ ಹಲ್ಲೆ ಮಾಡಿ ಅವರಿಗೆ ತೀವ್ರ ಸ್ವರೂಪದ ರಕ್ತ ಗಾಯವನ್ನುಂಟು ಮಾಡಿರುತ್ತೀರಿ. ಆ ಮೂಲಕ ಆರೋಪಿತರಾದ ನೀವು ಈ ನ್ಯಾಯಾಲಯದ ಸಂಜ್ಞೆಯೊಳಗೆ ಭಾರತೀಯ ದಂಡ ಸಂಹಿತೆ ಕಲಂ.307 ಸಹವಾಚಕ ಕಲಂ.34 ರನ್ವಯ ಅಪರಾಧವೆಸಗಿರುತ್ತೀರಾ ಎಂದು ನಿಮ್ಮ ಮೇಲೆ ಆಪಾದಿಸಿದ್ದೇನೆ.

ನಾಲ್ಕನೆಯದಾಗಿ, ಈ ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ 3 ನೇ ಆರೋಪಿಯಾದ ನೀವು ಸಮಾನ ಉದ್ದೇಶದಿಂದ ಜಗಳ ಬಿಡಿಸಲು ಬಂದ ಚಾಸಾ-1 ರವರಿಗೆ ರಿಪೀಸ್ ಪಟ್ಟಿಯಿಂದ ಅವರ ತಲೆಯ ಹಿಂಭಾಗಕ್ಕೆ ಹೊಡೆದು ತೀವ್ರ ಸ್ವರೂಪದ ರಕ್ತ ಗಾಯವನ್ನುಂಟು ಮಾಡಿರುತ್ತೀರಿ. ಆ ಮೂಲಕ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಭಾರತೀಯ ದಂಡ ಸಂಹಿತೆ ಕಲಂ.326 ಸಹವಾಚಕ ಕಲಂ.34 ರನ್ವಯ ಅಪರಾಧವೆಸಗಿರುತ್ತೀರಾ ಎಂದು ನಿಮ್ಮ ಮೇಲೆ ಆಪಾದಿಸಿದ್ದೇನೆ.

ಐದನೆಯದಾಗಿ, ಈ ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ 3 ನೇ ಆರೋಪಿಯಾದ ನೀವು ಸಮಾನ ಉದ್ದೇಶದಿಂದ ಜಗಳ ಬಿಡಿಸಲು ಬಂದ ಚಾಸಾ-1 ರವರಿಗೆ ರಿಪೀಸ್ ಪಟ್ಟಿಯಿಂದ ಅವರ ತಲೆಯ ಹಿಂಭಾಗಕ್ಕೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಆ ಮೂಲಕ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಭಾರತೀಯ ದಂಡ ಸಂಹಿತೆ ಕಲಂ.324 ಸಹವಾಚಕ ಕಲಂ.34 ರನ್ವಯ ಅಪರಾಧವೆಸಗಿರುತ್ತೀರಾ ಎಂದು ನಿಮ್ಮ ಮೇಲೆ ಆಪಾದಿಸಿದ್ದೇನೆ.

ಆರನೆಯದಾಗಿ, ಈ ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ 4 ನೇ ಆರೋಪಿಯಾದ ನೀವು ಸಮಾನ ಉದ್ದೇಶದಿಂದ ಜಗಳ ಬಿಡಿಸಲು ಬಂದ ಚಾಸಾ-1 ರವರಿಗೆ ಕಾಲಿನಿಂದ ಮೈಮೇಲೆ ತುಳಿದು ಸಾಮಾನ್ಯ ಸ್ವರೂಪದ ನೋವನ್ನುಂಟು ಮಾಡಿರುತ್ತೀರಿ. ಆ ಮೂಲಕ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಭಾರತೀಯ ದಂಡ ಸಂಹಿತೆ ಕಲಂ.323 ಸಹವಾಚಕ ಕಲಂ.34 ರನ್ವಯ ಅಪರಾಧವೆಸಗಿರುತ್ತೀರಾ ಎಂದು ನಿಮ್ಮ ಮೇಲೆ ಆಪಾದಿಸಿದ್ದೇನೆ.

ಕೊನೆಯದಾಗಿ, ಈ ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶ ಹೊಂದಿ ಚಾಸಾ-1 ಮತ್ತು 2 ರವರಿಗೆ ಭಯ ಬರುವ ರೀತಿಯಲ್ಲಿ ಅವರಿಗೆ ಜೀವ ಬೆದರಿಕೆಯನ್ನು ಹಾಕಿರುತ್ತೀರಿ. ಆ ಮೂಲಕ ಆರೋಪಿತರಾದ ನೀವು ಈ ನ್ಯಾಯಾಲಯದ ಸಂಜ್ಞೆಯೊಳಗೆ ಭಾರತೀಯ ದಂಡ ಸಂಹಿತೆ ಕಲಂ.506 ಸಹವಾಚಕ ಕಲಂ.34 ರನ್ವಯ ಅಪರಾಧವೆಸಗಿರುತ್ತೀರಾ ಎಂದು ನಿಮ್ಮ ಮೇಲೆ ಆಪಾದಿಸಿದ್ದೇನೆ.

ಈ ಮೇಲೆ ಹೇಳಿರುವ ದೋಷಾರೋಪಣೆ ಬಗ್ಗೆ ನಿಮ್ಮ ವಿಚಾರಣೆ ಈ ನ್ಯಾಯಾಲಯದಲ್ಲಿ ನಡೆಯತಕ್ಕದ್ದು ಎಂದು ಆದೇಶಿಸಲಾಗಿದೆ.

ದಿನಾಂಕಃ **05.08.2025.**

**(ಸಯೀದುನ್ನೀಸ)**
**2** ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮಂಡ್ಯ.